## ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.

### ಸಿ ಸಿ ಸಂಃ 839/2019

| | | |
|---|---|---|
| ಸಾಕ್ಷಿಯ ಹೆಸರುಃ | ರಾಜೇಶ್ ಕುಮಾರ್ | ಫ್ರಾಸಾಃಃ 2 |
| ತಂದೆ ಹೆಸರುಃ | ಲೇಟ್ ಶಿವಲಿಂಗು | ಚಾಸಾಃಃ 8 |
| ವಯಸ್ಸುಃ | 49 ವರ್ಷ | ಪ್ರಮಾಣೀಕರಿಸಿದ<br>ದಿಃ 14/11/2024 |
| ಉದ್ಯೋಗಃ | ಹೆಚ್.ಸಿ-282, ಪಿರಿಯಾಪಟ್ಟಣ ಪೊಲೀಸ್ ಠಾಣೆ | |
| ವಾಸ ಸ್ಥಳಃ | ಪಿರಿಯಾಪಟ್ಟಣ | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ**

ನಾನು 2017 ರಿಂದ 2023 ರವರೆಗೆ ಬೆಟ್ಟದಪುರ ಠಾಣೆಯಲ್ಲಿ ಪೊಲೀಸ್ ಮುಖ್ಯಪೇದೆಯಾಗಿ ಕರ್ತವ್ಯವನ್ನು ನಿರ್ವಹಿಸಿರುತ್ತೇನೆ.

2. ದಿನಾಂಕಃ 03/05/2018 ರಂದು ನಾನು ಹಗಲು ಕರ್ತವ್ಯದಲ್ಲಿದ್ದಾಗ ಚಾಸಾ-9 ರವರು ಪಿರಿಯಾಪಟ್ಟಣ ಸರ್ಕಾರಿ ಆಸ್ಪತ್ರೆಯಿಂದ ಬಂದ ಮೆಮೋ ವಿಚಾರವಾಗಿ ಆಸ್ಪತ್ರೆಗೆ ಹೋಗಿ ಗಾಯಾಳುವಿನ ಹೇಳಿಕೆ ಪಡೆಯಲು ಸೂಚಿಸಿದ್ದರು. ಅದರಂತೆ ನಾನು ಆಸ್ಪತ್ರೆಗೆ ಬೇಟಿ ನೀಡಿ ಚಾಸಾ-1 ರವರ ಹೇಳಿಕೆಯನ್ನು ನಾನೇ ಬರೆದುಕೊಂಡಿರುತ್ತೇನೆ. ನಂತರ ಸದರಿ ಹೇಳಿಕೆಯನ್ನು ಠಾಣೆಗೆ ತಂದು ಚಾಸಾ-9 ರವರಿಗೆ ನೀಡಿರುತ್ತೇನೆ. ಸಾಕ್ಷಿಯು ಹೇಳಿಕೆ ದೂರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.4** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.4(ಎ)** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ** ಎಸ್.ಎಂ.ಪಿ **ವಕೀಲರಿಂದಃ**

3. ಚಾಸಾ–9 ರವರಿಗೆ ಆಸ್ಪತ್ರೆಯಿಂದ ಯಾವುದೇ ಮೇಮೋ ಬಂದಿರುವುದಿಲ್ಲ ಎಂದರೆ ಸರಿಯಲ್ಲ. ಅದರ ಆಧಾರದ ಮೇರೆಗೆ ನಾನು ಆಸ್ಪತ್ರೆಗೆ ಬೇಟಿ ನೀಡಿಲ್ಲ ಎಂದರೆ ಸರಿಯಲ್ಲ. ನಾನು ಗಾಯಾಳುವಿನ ಹೇಳಿಕೆ ಬರೆದುಕೊಂಡಿಲ್ಲ ಎಂದರೆ ಸರಿಯಲ್ಲ. ನಾನು ಆ ದಿನ ಕರ್ತವ್ಯಕ್ಕೆ ಹಾಜರಾದ ಬಗ್ಗೆ ದಾಖಲಾತಿ ಹಾಜರುಪಡಿಸಿಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದ ಎಲ್ಲಾ ಅಂಶಗಳು ಸುಳ್ಳು ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

**ತೆರದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**
**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**ಹೆಃಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.**
**ಪಿರಿಯಾಪಟ್ಟಣ.**